**MVC: 689/2024**
**P.W-1**

## <u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ</u>

ದಿನಾಂಕಃ 15.04.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

### <u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ</u>

ನಾನು ದಿನಾಂಕ 15.04.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಪ್ರ.ವ.ವ ದಾಖಲೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 2 ಎಂದು, ಚಾರ್ಜ್ ಶೀಟ್ ನಮೂನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 3 ಎಂದು, ಕೃತ್ಯಸ್ಥಳದ ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 4 ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 5 ಎಂದು, ಐ.ಎಂ.ವಿ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 6 ಎಂದು ಗುರುತಿಸಲಾಯಿತು.

### <u>ಪಾಟೀ ಸವಾಲು 3 ನೇ ಎದುರುದಾರರ ಪರ ವಕೀಲರಿಂದ</u>

ನಾನು ಬಿ.ಎ ಪದವಿ ವ್ಯಾಸಾಂಗ ಮಾಡಿರುತ್ತೇನೆ. ಅಪಘತಾವಾದ ಕಾಲಕ್ಕೆ ನನಗೆ 22 ವರ್ಷ ವಯಸ್ಸು ಇತ್ತು ಎಂಬುದಕ್ಕೆ ಸಂಬಂಧಿಸಿದಂತೆ ನನ್ನ ಆಧಾರ್ ಕಾರ್ಡ್ ಹಾಜರುಪಡಿಸಿರುತ್ತೇನೆ. ಹಾಜರುಪಡಿಸಿಲ್ಲ ಆದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 22.08.2016 ರಂದು ಅಪಘಾತವಾಗಿರುತ್ತದೆ. ಆ ದಿನ ನಾನು ಸಿದ್ದಾಪುರದಿಂದ ಹಾಲಿನ ಕ್ಯಾನ್ ತೆಗೆದುಕೊಂಡು ಚಿಕ್ಕಜೋಗಿಹಳ್ಳಿಗೆ ನನ್ನ ಬೈಕ್ ನಲ್ಲಿ ಹೋಗುತ್ತಿದ್ದೆ. ಸದರಿ ಬೈಕ್ ನಲ್ಲಿ ಎರಡು 25 ಲೀಟರ್ ನ ಹಾಲು ತುಂಬಿದ ಕ್ಯಾನ್ ಗಳನ್ನು ತೆಗೆದುಕೊಂಡು ಹೋಗುತ್ತಿದ್ದೆ. ಸಿದ್ದಾಪುರ-ಚಿಕ್ಕಜೋಗಿಹಳ್ಳಿ ರಸ್ತೆಯ ಮಾರೆಮ್ಮ ದೇವಸ್ಥಾನದ ಹತ್ತಿರದ ತಿರುವಿನಲ್ಲಿ ಎದುರುಗಡೆಯಿಂದ ಟಾಟಾ ಮಾಂಜ್ರ ಕಾರ್ ಬಂದು ನನಗೆ ಡಿಕ್ಕಿಪಡಿಸಿರುತ್ತೇನೆ. ಕಾರ್ ನಂಬರ್ ನನಗೆ ಗೊತ್ತಿಲ್ಲ. ಅಪಘಾತವಾದ ನಂತರ ನಾನು ಚಿಕ್ಕಜೋಗಿಹಳ್ಳಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ. ಅಲ್ಲಿ ನನಗೆ ಸಾದಾ ಸ್ವರೂಪದ

**MVC: 689/2024**
**P.W-1**

ಗಾಯಗಳು ಆಗಿವೆ ಎಂದು ವೈದ್ಯರು ನನಗೆ ಗಾಯದ ಪ್ರಮಾಣ ಪತ್ರ ನೀಡಿರುತ್ತಾರೆ ಎಂದರೆ ಸರಿ. ಆದರೆ ನನಗೆ ತೀವ್ರ ಸ್ವರೂಪದ ಗಾಯವಾಗಿತ್ತು ಎಂದು ಸಾಕ್ಷಿ ನುಡಿಯುತ್ತಾರೆ. ಈ ಸಂಬಂಧವಾಗಿ ಯಾವುದೇ ದಾಖಲೆ ಸಲ್ಲಿಸಿಲ್ಲ ಎಂದರೆ ಸರಿ. ಅಪಘಾತವಾದ 4 ದಿನಗಳ ನಂತರ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿರುತ್ತೇನೆ. ದಾವಣಗೆರೆ ಆಸ್ಪತ್ರೆಯಲ್ಲಿ ನಾನು ಚಿಕಿತ್ಸೆ ಪಡೆದ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ವೈದ್ಯಕೀಯ ಖರ್ಚು ರೂ. 2 ಲಕ್ಷ ಆಗಿದೆ ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ.

ನನಗೆ ತಿಂಗಳಿಗೆ ರೂ. 25 ಸಾವಿರ ಆದಾಯ ಇತ್ತು ಎಂಬುದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿ. ನನಗೆ ಯಾವುದೇ ತೀವ್ರ ಸ್ವರೂಪದ ಗಾಯಗಳು ಆಗಿಲ್ಲ ಆದರೂ ಸಹ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**